ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 11 ನೇ ಮಾರ್ಚ್, 2020

ರಾಜ್ಯದಲ್ಲಿರುವ ವಿದ್ಯಾರ್ಥಿ ವಸತಿ ನಿಲಯಗಳ ಬಗ್ಗೆ

ಡಾ|| ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

599 (871) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಮಾಜ ಕಲ್ಯಾಣ ಇಲಾಖಾ ವ್ಯಾಪ್ತಿಯ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆ ಎಷ್ಟು ; ಕಳೆದ 3 ವರ್ಷಗಳಿಂದ ಈ ವಿದ್ಯಾರ್ಥಿ ನಿಲಯಗಳಿಗೆ ನೇಮಕಗೊಂಡ ಸಹಾಯಕರುಗಳ ಸಂಖ್ಯೆ ಎಷ್ಟು ;

(ಆ) ಈ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಅನುಗುಣವಾಗಿ ಅಡುಗೆ ಸಹಾಯಕರುಗಳು ಹಾಗೂ ಇನ್ನಿತರ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆಯೇ ; ಇವರುಗಳು ಖಾಯಂ ನೌಕರರುಗಳೇ ;

(ಇ) ಖಾಯಂ ನೌಕರರುಗಳಲ್ಲದೇ ಗುತ್ತಿಗೆ ನೌಕರರುಗಳಿಂದ ಈ ವಿದ್ಯಾರ್ಥಿ ವಸತಿ ನಿಲಯಗಳನ್ನು ಸರಿಯಾದ ರೀತಿಯಲ್ಲಿ ನಡೆಸಲು ಸಾಧ್ಯವೇ ; ಖಾಯಂ ನೌಕರರುಗಳಿದ್ದರೆ, ಜವಾಬ್ದಾರಿಯುತವಾಗಿ ಕೆಲಸವನ್ನು ನಿರ್ವಹಿಸಲು ಸಾಧ್ಯವಿಲ್ಲವೇ ?